# ಬೆಳಗಾವಿಯ ವೀಣಾ ಉಮೇಶ ಕಿಡದಾಳ ಅವರಿಗೆ ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿ



ಬೆಳಗಾವಿ : :ಮಹಿಳೆ ಮನೆ ಬೆಳಗುವ ಮೊದಲು ಮಾತೆ, ಅವಳಿಗೆ ಸಮಾಜ ಪ್ರೋತ್ಸಾಹಿಸಿ ಗೌರವಿಸಿಬೇಕು. ಬೆಳಿಗ್ಗೆಯಿಂದ ರಾತ್ರಿ ಮಲಗುವವರೆಗೂ ದಿನವಿಡಿ ದುಡಿಯುವ ಕಾಯಕ ಮಹಿಳೆಯದು ಕಾರಣ ಇವಳ ಪ್ರತಿಭೆಗೆ ನಮ್ಮ ಸರಕಾರ ರಾಜ್ಯ ಮಟ್ಟದ ಕಿತ್ತೂರ ರಾಣಿ ಚನ್ನಮ್ಮ ಪ್ರಶಸ್ತಿಯನ್ನು ಪ್ರತಿ ವರ್ಷ ನೀಡುತ್ತಾ ಬರುತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಹೇಳಿದರು ಅವರು ಬೆಂಗಳೂರಿನ ಜವಾಹರ ಬಾಲ ಭವನ ಕಬ್ಬನ್ ಉದ್ಯಾನವನದಲ್ಲಿ ಕರ್ನಾಟಕ ಸರಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬೆಂಗಳೂರು ಇವರು ಹಮ್ಮಿಕೊಳ್ಳಲಾದ, ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಹಿಳೆ ಇಂದು ಶಿಕ್ಷಣ, ರಾಜಕೀಯ, ಸಾಮಾಜಿಕ, ಕ್ರೀಡೆ, ಧಾರ್ಮಿಕ ಪ್ರತಿಯೊಂದು ಕ್ಷೇತ್ರದಲ್ಲಿ ಮುಂದೆ ಬರ್ತಾ ಇದಾಳೆ ಅವಳಿಗೆ ಪ್ರೋತ್ಸಾಹಿಸಬೇಕೆಂದು ಹೇಳುತ್ತಾ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಗೈದ ಸಾಧಕ ಮಹಿಳೆಯರಿಗೆ ರಾಜ್ಯ ಮಟ್ಟದ " ಕಿತ್ತೂರ ರಾಣಿ ಚನ್ನಮ್ಮ" ಪ್ರಶಸ್ತಿನ್ನು ಪಡೆಕೊಂಡು ಇನ್ನೂ ಹೆಚ್ಚಿನ ಸಾಧನೆ ಮಾಡಬೇಕೆಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ ನುಡಿದರು.

ಇದೆ ಸಂಧರ್ಭದಲ್ಲಿ ಬೆಳಗಾವಿ ನಗರದ ನವಾಸಿ ಸಾಮಾಜಿಕ ಹೋರಾಟ ಗಾರ್ತಿ, ಕಲಾವಿದೆ , ಮಹಿಳಾ ಸಂಘಟಕಿ, ಮಹಿಳಾ ಶಕ್ತಿ ಶ್ರೀಮತಿ ವೀಣಾ ಉಮೇಶ ಕಿಡದಾಳ ಇವರ ಅನುಪಮ ಸೇವೆಯನ್ನು ಗುರುತಿಸಿ ಇವರಿಗೆ ರಾಜ್ಯ ಮಟ್ಟದ ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ನೀಡಿ ಗೌರವಿಸಿದರು. ಪ್ರಶಸ್ತಿ ಪುರಸ್ಕೃತೆ ವೀಣಾ ಕಿಡದಾಳರವರು ಸ್ತ್ರೀ ಮಾನವ ಜನಾಂಗದ ಮೊದಲ ಶಿಕ್ಷಕಿ,ಮಾನವ ಕಲ್ಯಾಣದ ಮಹತ ಕಾರ್ಯ ಮಾಡುವರೇ ಮಹಿಳೆಯರು, ಹೇಣ್ಣು ಹೆಣ್ಣಲ್ಲ ಜಗದ ಕಣ್ಣು ಮಹಿಳೆಯರಿಗೆ ಪುರುಷರಷ್ಟೇ ಸಮಾನ ಅವಕಾಶ ಕೊಡಬೇಕು ಹೆಣ್ಣು ಇಂದು ಅಬಲೆ ಅಲ್ಲ ಸಬಲೇ, ಎಲ್ಲಿ ಸ್ತ್ರಿಯರು ಗೌರವಿಸಲ್ಪಪಡುವರೋ ಅಲ್ಲಿ ದೇವತೆಗಳ ಸಂತೃಪ್ತಿ ಹೊಂದುತ್ತಾರೆ. ಮಹಿಳೆ ತಾಯಿಯಾಗಿ, ತಂಗಿಯಾಗಿ, ಅಕ್ಕನಾಗಿ, ಹೆಂಗತಿಯಾಗಿ, ಮಗಳಾಗಿ,ಸೊಸೆಯಾಗಿ, ಗೃಹಿಣಿಯಾಗಿ, ಪ್ರತಿಯೊಬ್ಬರ ಜೀವನದಲ್ಲಿ ಪಾತ್ರವಹಿಸುತ್ತಾಳೆ.ಪ್ರತಿಯೊಬ್ಬರ ಬಾಳಿಗೆ ಬೆಳಕಾಗಿರುವ ಮಹಿಳೆಯರಿಗೆ ಹಾಗೂ ನನಗೆ ಇಂತಹ ಪ್ರಶಸ್ತಿ ಪುರಸ್ಕಾರ ಮಾಡಿದ್ದು ನನಗೆ ತುಂಬಾ ಖುಷಿಯಾಗಿದೆ. ನನಗೆ ಸಿಕ್ಕ ಅವಕಾಶ ಎಲ್ಲ ಮಹಿಳೆರಿಗೂ ಸಿಗಲಿ ಹಾಗೂ ಮಹಿಳಾ ಮತ್ತು ಕಲ್ಯಾಣ ಅಭಿವೃದ್ಧಿ ಇಲಾಖೆಯ ಸಚಿವರಿಗೆ ಹಾಗೂ ಅಧಿಕಾರಿಗಳಿಗೆ ಅಭಿನಂದನೆಗಳು ಎಂದು ಅಭಿಮತ ವ್ಯಕ್ತ ಪಡಿಸಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರು ಪದ್ಮಾವತಿ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಡಾ.ಬಿ ಸಿ ಪ್ರಕಾಶ್ ಹಾಗೂ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆ

# ಬರ : ಸಮರ್ಪಕವಾಗಿ ನಿರ್ವಹಿಸಿ




ಗದಗ ಮಾರ್ಚ 16: ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಸಮರ್ಪಕವಾಗಿ ನಿರ್ವಹಿಸಲು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸೂಚಿಸಿದರು. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರದಂದು ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಕುಡಿಯುವ ನೀರು ಹಾಗೂ ಜಾನುವಾರು ಮೇವಿನ ಸ್ಥಿತಿಗತಿಯ ಸಮರ್ಪಕವಾಗಿ ಯಾವುದೇ ತೊಂದರೆಯಾಗದಂತೆ ನಿರ್ವಹಿಸಬೇಕು. ಕುಡಿಯುವ ನೀರು, ಮೇವಿನ ಸ್ಥಿತಿಗತಿ ಮತ್ತು ಬರನಿರ್ವಹಣೆ ಸಂಬಂಧಿಸಿದಂತೆ ಯಾವುದೇ ದೂರುಗಳಿಗೆ ಆಸ್ಪದ ನೀಡದಂತೆ ಕಾರ್ಯನಿರ್ವಹಿಸಬೇಕು. ಅಗತ್ಯವಿರುವ ಪ್ರದೇಶಗಳಲ್ಲಿ ಜಿಪಿಎಸ್ ಅಳವಡಿಸಿರುವ ಟ್ಯಾಂಕರ್ಗಳ ಮೂಲಕ ನೀರು ಸರಬರಾಜು ಮಾಡಬೇಕು.. ಕುಡಿಯುವ ನೀರಿನ ತೊಂದರೆಗೊಳಗಾದ ಗ್ರಾಮಗಳನ್ನು ಈಗಾಗಲೇ ಗುರುತಿಸಿದ್ದು ಯಾವುದೇ ಕಾರಣಕ್ಕೂ ಜಿಲ್ಲೆಯ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಮುಂಜಾಗ್ರತಾ ಕ್ರಮ ಜರುಗಿಸಬೇಕೆಂದು ತಿಳಿಸಿದರು.

ಮುಂಬರುವ ಬೇಸಿಗೆ ದಿನಗಳಲ್ಲಿ ಸೂರ್ಯನ ಶಾಖ ದಿನದಿಂದ ದಿನಕ್ಕೆ ಹೆಚ್ಚಾಗುವ ಹಿನ್ನೆಲೆಯಲ್ಲಿ ಹೀಟ್ ವೇವ್ ( ಶಾಖದ ಹೊಡೆತ) ಹೀಟ್ ವೇವ್ ಸ್ಟ್ರೋಕ್‌ನಿಂದಾಗಿ ಸಾರ್ವಜನಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ ಸಾರ್ವಜನಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸೂಚಿಸಿದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಸಾರ್ವಜನಕರು ಬಿಸಿಲು ದಿನಗಳಲ್ಲಿ ಕೊಡೆ/ ಛತ್ರಿ ಬಳಸರಿ ಹಾಗೂ ಸಾಧ್ಯವಾದಷ್ಟು ತಂಪಾದ ಸ್ಥಳಗಳಲ್ಲಿ ಉಳಿಯಲು ಪ್ರಯತ್ನಿಸಬೇಕು. ಬಿಸಿ ಗಾಳಿ ಹಾಗೂ ಅತಿಯಾದ ತಾಪಮಾನದಿಂದ ಆರೋಗ್ಯ ಸಮಸ್ಯೆ ಉಂಟಾದಲ್ಲಿ ಸಮೀಪದ ಆರೋಗ್ಯ ಕೇಂದ್ರವನ್ನು ಸಂಪರ್ಕಿಸಬೇಕು ಎಂದರು.

ಉತ್ತಮ ಗುಣಮಟ್ಟದ ಖಾಸಗಿ ಬೋರ್ವೆಲ್‌ಗಳಿಂದ ಪೈಪ್‌ಲೈನ್ ಮೂಲಕ ನೀರು ಸರಬರಾಜು ಮಾಡಲು ಕ್ರಮ ವಹಿಸಬೇಕು. ಬಿಸಿಲಿನ ತಾಪಮಾನ ಹೆಚ್ಚಾಗಿದ್ದು ನೀರು ಆವಿಯಾಗುತ್ತಿರುವ ಪ್ರಮಾಣ ಹೆಚ್ಚಾಗಿದ್ದು ಸಾರ್ವಜನಕರು ನೀರನ್ನು ಪೋಲು ಮಾಡದೇ ಮಿತವಾಗಿ ಬಳಸಬೇಕು. ನದಿ ತೀರದ ರೈತರು ಪಂಪ್‌ಸೆಟ್ ಮೂಲಕ ನೀರೆತ್ತದಂತೆ ಕಟ್ಟುನಟ್ಟಿನ ಕ್ರಮ ಕೈಗೊಳ್ಳಬೇಕು. ಈ ಕುರಿತು ಅಧಿಕಾರಿಗಳು ನಷ್ಕಾಳಜಿ ವಹಿಸದೇ ಕಾರ್ಯಪ್ರವೃತ್ತರಾಗಬೇಕು. ಸಮರ್ಪಕವಾಗಿ ಮೇವಿನ ದಾಸ್ತಾನು ಮಾಡಿಟ್ಟುಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸಭೆಯಲ್ಲಿ ಆದೇಶಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ, ಜಿ.ಪಂ. ಮುಖ್ಯ ಯೋಜನಾಧಿಕಾರಿ ನಿರ್ಮಲಾ, ತಾ.ಪಂ. ಕಾರ್ಯನಿರ್ವಹಣಾಧಿಕಾರಿಗಳು, ತಹಶೀಲ್ದಾರರುಗಳು . ಪಿಡಿಓ ಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಸಂಕಲ್ಪ ಕಿಡ್ನಿ ಕೇರ್‌ದಲ್ಲಿ ವಿಶ್ವ ಕಿಡ್ನಿ ದಿನಾಚರಣೆ ಕಿಡ್ನಿ ಸ್ವಾಸ್ಥ್ಯಕ್ಕಾಗಿ ಇಂದೇ ಸಂಕಲ್ಪ ಮಾಡಿ : ಡಾ.ಗೋಡಖಿಂಡಿ




ಗದಗ, ಮಾ. : ಕಿಡ್ನಿ ಸ್ವಾಸ್ಥ್ಯಕ್ಕಾಗಿ ನಾವಿಂದು ನಮ್ಮ ಜೀವನಶೈಲಿಯನ್ನು ಬದಲಾವಣೆ ತಂದುಕೊಳ್ಳಲು ಸಂಕಲ್ಪ ಮುಂದಾಗುವದು ಅವಶ್ಯ ಹಾಗೂ ಅನಿವಾರ್ಯವಿದೆ ಎಂದು ಗದುಗಿನ ಹಿರಿಯ ತಜ್ಞ ವೈದ್ಯ ಡಾ.ಕುಶಾಲ ಗೋಡಖಿಂಡಿ ಅಭಿಪ್ರಾಯಪಟ್ಟರು.

ಅವರು ಗುರುವಾರ ಗದುಗಿನ ಸಂಕಲ್ಪ ಕಿಡ್ನಿ ಕೇರ್‌ನಲ್ಲಿ ಏರ್ಪಡಿಸಿದ್ದ ವಿಶ್ವ ಕಿಡ್ನಿ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಮನುಷ್ಯನ ದೇಹ ರಚನೆಯಲ್ಲಿ ಮೂತ್ರಪಿಂಡ ಅತ್ಯಂತ ಮಹತ್ವದ್ದಾಗಿದೆ. ದೇಹದಲ್ಲಿನ ನಿರುಪಯುಕ್ತ ದ್ರವ ಪದಾರ್ಥವನ್ನು ಹೊರಹಾಕುವಲ್ಲಿ ಈ ಮೂತ್ರಪಿಂಡಗಳು ಪರಿಣಾಮಕಾರಿ ಕಾರ್ಯ ಮಾಡುವವು. ಕಿಡ್ನಿಯನ್ನು ಪಿಲ್ಟರ್ ಎಂದೆನ್ನಬಹುದು. ಕಿಡ್ನಿಯಲ್ಲಿ ತೊಂದರೆಗಳು ಕಂಡು ಬಂದಲ್ಲಿ ಆರೋಗ್ಯದ ಮೇಲೆ ಪರಿಣಾಮವಾಗುವದು ಎಂದರು.

ಆಗಾಗ ತಜ್ಞ ವೈದ್ಯರ ತಪಾಸಣೆ ಮಾಡಿಸಿಕೊಳ್ಳಬೇಕು. ಮೂತ್ರದಲ್ಲಿ ರಕ್ತ ಬಂದರೆ ಅಲಕ್ಷ ಬೇಡ, ಅಧಿಕ ರಕ್ತದೊತ್ತಡ ಹಾಗೂ ನೋವು ನಿವಾರಕ ಮಾತ್ರೆಗಳ ಸೇವನೆಯಿಂದ ಕಿಡ್ನಿ ಹಾನಿಯಾಗುವದು ಆದ್ದರಿಂದ ಸದೃಢ ಆರೋಗ್ಯದಿಂದ ಸದೃಢ ಕಿಡ್ನಿ ರೂಪುಗೊಳ್ಳಲು ಸಾಧ್ಯ. ನಿಯಮಿತ ಆಹಾರ-ನೀರು ಸೇವನೆ, ಲಘು ವ್ಯಾಯಾಮ, ವಾಯುವಿಹಾರ ಮಾಡಿ ಎಂದರಲ್ಲದೆ ಕಿಡ್ನಿ ಕಸಿ ಮಾಡಲು ವೈದ್ಯಕೀಯದಲ್ಲಿ ಸಾಕಷ್ಟು ಸುಧಾರಣೆಗಳು ಬಂದಿದೆ ಎಂದರು.ಆಗಾಗ ತಜ್ಞವೈದ್ಯರ ತಪಾಸಣೆ ಮಾಡಿಸಿಕೊಳ್ಳಬೇಕು. ಮೂತ್ರದಲ್ಲಿ ರಕ್ತ ಬಂದರೆ ಅಲಕ್ಷ ಬೇಡ, ಅಧಿಕ ರಕ್ತದೊತ್ತಡ ಹಾಗೂ ನೋವು ನಿವಾರಕ ಮಾತ್ರೆಗಳ ಸೇವನೆಯಿಂದ ಕಿಡ್ನಿ ಹಾನಿಯಾಗುವದು ಆದ್ದರಿಂದ ಸದೃಢ ಆರೋಗ್ಯದಿಂದ ಸದೃಢ ಕಿಡ್ನಿ ರೂಪುಗೊಳ್ಳಲು ಸಾಧ್ಯ. ನಿಯಮಿತ ಆಹಾರ-ನೀರು ಸೇವನೆ, ಲಘು ವ್ಯಾಯಾಮ, ವಾಯುವಿಹಾರ ಮಾಡಿ ಎಂದರಲ್ಲದೆ ಕಿಡ್ನಿ ಕಸಿ ಮಾಡಲು ವೈದ್ಯಕೀಯದಲ್ಲಿ ಸಾಕಷ್ಟು ಸುಧಾರಣೆಗಳು ಬಂದಿದೆ ಎಂದರು. ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಗದಗ ಐಎಂಎ ಮಾಜಿ ಅಧ್ಯಕ್ಷ ಡಾ.ಪ್ಯಾರಅಲಿ ನೂರಾನಿ ಹಾಗೂ ಇನ್ನೋರ್ವ ಮುಖ್ಯ ಅತಿಥಿ ಡಾ.ಶರಣ ಆಲೂರ ಮಾತನಾಡಿ ಅವರು ಮಾತನಾಡಿ ವಿಜ್ಞಾನ ಮತ್ತು ತಂತ್ರಜ್ಞಾನ ಇಂದು ಸಾಕಷ್ಟು ಅಭಿವೃದ್ಧಿ ಹೊಂದಿದೆ ಕಿಡ್ನಿ ಕಸಿ ಮಾಡುವದು ಇತ್ತಿಚಿನ ದಿನಗಳಲ್ಲಿ ಇನ್ನಷ್ಟು ಸುಲಭಗೊಳಿಸಲಾಗಿದೆ ಎಂದರು.

ಅತಿಥಿಯಾಗಿ ಆಗಮಿಸಿದ್ದ ವಿದ್ಯಾದಾನ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ ಅವರು ಮಾತನಾಡಿ ಗದಗ ಪರಿಸರದಲ್ಲಿ ಸಂಕಲ್ಪ ಕಿಡ್ನಿ ಕೇರ್ ಸೆಂಟರ್ ಉತ್ತಮ ಕಾರ್ಯ ಮಾಡುತ್ತಿದೆ ಎಂದರು. ಸಂಕಲ್ಪ ಕಿಡ್ನಿ ಕೇರ್‌ನ ಡಾ.ಅವಿನಾಶ್ ಓದುಗೌಡರ ಕಿಡ್ನಿ ಸಂರಕ್ಷಣೆ, ಮುಂಜಾಗ್ರತಾ ಕ್ರಮ, ಕಿಡ್ನಿ ಕಸಿ, ವೈದ್ಯಕೀಯ ಆರೈಕೆ ವಿಷಯವಾಗಿ ವಿಶ್ಲೇಷಿಸಿ ಮಾತನಾಡಿದರಲ್ಲದೆ ಗದುಗಿನಲ್ಲಿ ಕಿಡ್ನಿ ಕಸಿ ವೈದ್ಯಕೀಯ ಚಿಕಿತ್ಸೆಯು ಹುಲಕೋಟಿಯ ಕೆ.ಎಚ್.ಪಾಟೀಲ ಆಸ್ಪತ್ರೆ ಹಾಗೂ ಸಂಕಲ್ಪ ಆಸ್ಪತ್ರೆಯ ತಜ್ಞವೈದ್ಯರ ತಂಡದಿಂದ ಆರಂಭಗೊಳ್ಳಲಿದೆ ಇದು ಗದಗ ಜಿಲ್ಲೆಯಲ್ಲಿಯೇ ಪ್ರಪ್ರಥಮ ಪ್ರಯತ್ನವಾಗಿದೆ ಎಂದರು.

ಡಾ.ನಮ್ರತಾ ಬಾಲರಡ್ಡಿಯವರ ಸ್ವಾಗತಿಸಿದರು ಡಾ.ಮೇಘನಾ ಹಿಪ್ಪರಗಿ ನಿರೂಪಿಸಿದರು ಕೊನೆಗೆ ಡಾ.ಮಹಾಲಕ್ಷ್ಮೀ ಕೋಳಿವಾಡ ವಂದಿಸಿದರು. ಕಾರ್ಯಕ್ರಮದಲ್ಲಿ ಡಾ.ದೀಪಕ ಕುರಹಟ್ಟಿ, ಡಾ.ಪವನ ಕೋಳಿವಾಡ, ಡಾ.ಶಿವಕುಮಾರ ಪವಾಡಶೆಟ್ಟರ, ಡಾ.ಶಿಲ್ಪಾ ಪವಾಡಶೆಟ್ಟರ ಮುಂತಾದವರಿದ್ದರು.

ಆರಂಭದಲ್ಲಿ ನರ್ಸಿಂಗ್ ಕಾಲೇಜ್ ವಿದ್ಯಾರ್ಥಿಗಳ ತಂಡದಿಂದ ಕಿಡ್ನಿ ಜಾಗೃತಿ ಮೂಡಿಸುವ ಅಣಕು ಪ್ರದರ್ಶನ ನಡೆಯಿತು. ನರ್ಸಿಂಗ್ ಕಾಲೇಜ್, ಸ್ಪರ್ಶಾ ಕಾಲೇಜ್, ಕೆ.ಎಚ್.ಪಾಟೀಲ ನರ್ಸಿಂಗ್ ಇನ್‌ಸ್ಟಿಟ್ಯೂಟ್‌ನ ವಿದ್ಯಾರ್ಥಿಗಳಲ್ಲಿ ಗಣ್ಯಮಾನ್ಯರು, ರೋಗಿಗಳು, ಸಾರ್ವಜನಕರು ಪಾಲ್ಗೊಂಡಿದ್ದರು.

# ಪುರಸಭೆ ವ್ಯಾಪ್ತಿಯ ವಿವಿಧ ಪ್ರದೇಶದಲ್ಲಿ ಅಭಿವೃದ್ಧಿ ಕಾಮಗಾರಿಗೆ ಚಾಲನೆ



ಮೂಡಲಗಿ: ಮೂಡಲಗಿ ಪುರಸಭೆಯ ವ್ಯಾಪ್ತಿಯ ಲಕ್ಷ್ಮೀ ನಗರ, ವಿದ್ಯಾನಗರ, ರಾಜೀವ ಗಾಂಧಿ ನಗರದ , ಗಾಂಧಿ ಚೌಕ, ಗಂಗಾನಗರ ಮತ್ತು ಗುಲಾರ್ಪೂರದಲ್ಲಿ ನಗರೋತ್ಥಾನ 4ರ ಅನುದಾನದಲ್ಲಿ ಚರಂಡಿ ಮತ್ತು ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜಾ ಕಾರ್ಯಕ್ರಮ ಶುಕ್ರವಾರ ಮಧ್ಯಾಹ್ನ ಜರುಗಿತು.

ಈ ಸಂಧಭದಲ್ಲಿ ಪುರಸಭೆ ಸದಸ್ಯರಾದ ಹನಮಂತ ಗಡ್ಡಮನ, ರವಿಂದ್ರ ಸಣ್ಣಕ್ಕಿ, ಶಿವು ಸಣ್ಣಕ್ಕಿ, ಶಿವು ಚಂಡಕಿ, ರವಿ ಮೂಡಲಗಿ, ಮತ್ತು ಪಾಸ್ಟರ ರೇ. ವಿಜಯಕುಮಾರ ಮೂಡಲಗಿ ಮರೆಪ್ಪ ಮರೆಪ್ಪಗೋಳ, ಅನ್ವರ ನದಾಫ್, ಬಸು ಝುಂಡೇಕುರಬರ, ಪ್ರವೀಣ ಗಾಡವಿ, ಯಲ್ಲಪ್ಪ ಸಣ್ಣಕ್ಕಿ, ಸಂತೋಷ ಪಾಟೀಲ, ವೆಂಕಟೇಶ ಲಂಕೆಪ್ಪನವರ, ಪ್ರಭಾಕರ ಬಂಗೇನವ್ವರ, ರಮೇಶ ಸಣ್ಣಕ್ಕಿ, ಡ್ಯಾನಲ ಸರ್ವಿ, ಮಲ್ಲಪ್ಪ ಢವಳೇಶ್ವರ, ಪುಂಡಲೀಕ ಮಾದರ ಹಾಗೂ ಪುರಸಭೆ ಅಧಿಕಾರಿಗಳು ಇದ್ದರು.

# ವಿದ್ಯಾದಾನ ಅತ್ಯಂತ ಶ್ರೇಷ್ಠ: ಎಂ.ಎಲ್.ಸಿ ತಳವಾರ



ಬೆಳಗಾವಿ 15: ಎಲ್ಲ ದಾನಗಳಲ್ಲಿ ವಿದ್ಯಾದಾನ ಅತ್ಯಂತ ಶ್ರೇಷ್ಠವಾದದ್ದು. ಈ ಹಿನ್ನೆಲೆಯಲ್ಲಿ ಶೈಕ್ಷಣಿಕ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ಸಾಬಣ್ಣ ತಳವಾರ ಹೇಳಿದರು.

ಆಂಜನೇಯ ನಗರ ಸರಕಾರಿ ಶಾಲೆಯ 2022-23ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಶಾಲಾ ಅಭಿವೃದ್ಧಿ ಕಾಮಗಾರಿಗೆ ಶುಕ್ರವಾರ ಚಾಲನೆ ನೀಡಿ ಮಾತನಾಡಿದರು.

ಸರಕಾರಿ ಶಾಲೆಗಳ ಅಭಿವೃದ್ಧಿಯಿಂದ ಬಡ ಮಕ್ಕಳಿಗೆ ಶಿಕ್ಷಣ ಸೌಲಭ್ಯ ದೊರೆತು ಅವರು ಪರಿವರ್ತನೆ ಹೊಂದಲು ದಾರಿಯಾಗುತ್ತದೆ ಎಂದ ಅವರು ಶಿಕ್ಷಣದ ಅಗತ್ಯತೆ ಕುರಿತು ಸಂವಿಧಾನ ಶಿಲ್ಪಿ ಡಾ. ಬಿ. ಆರ್. ಅಂಬೇಡ್ಕರ ಅವರ ಹೇಳಿಕೆಯನ್ನು ಸಾಬಣ್ಣವರ ಪ್ರತಿಪಾದಿಸಿದರು. ನಗರಸೇವಕ ರಾಜಶೇಖರ ಡೋಣಿ, ಪತ್ರಕರ್ತ ಗೋಪಾಲ ಖಟಾವಕರ ಕಾರ್ಯಕ್ರಮದಲ್ಲಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಸುಜೀತ, ಮೂಗಿ, ಮಸಳಿ, ಮಠದ, ಪಾಶ್ಚಾಪೂರ, ಕುಲಕರ್ಣಿ, ಮಿರ್ಜಿ, ಕಸ್ತೂರಿ ಭಾವಿ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಎಂ.ಎಲ್.ಸಿ ಸಾಬಣ್ಣ ತಳವಾರ, ಸಿಆರ್‌ಪಿ ಶೋಭಾ ಹಿರೇಮಠ ಇವರನ್ನು ಸತ್ಕರಿಸಲಾಯಿತು. ಮುಖ್ಯಾಧ್ಯಾಪಕಿ ಎಂ.ಎಂ. ಖೋದಾನಪೂರ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಕಿ ಬಿಎಸ್ ಅವ್ವಕನವರ ನಿರೂಪಿಸಿದರು. ಕೊನೆಗೆ ಶಿಕ್ಷಕಿ ಎಸ್.ಎಚ್. ಬೋಗಾರ ವಂದಿಸಿದರು.

# ಸಾರ್ವಜನಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಸಲಹೆ

ಗದಗ ಮಾರ್ಚ 16: ಪ್ರಸ್ತುತ ಹಾಗೂ ಮುಂಬರುವ ಬೇಸಿಗೆ ದಿನಗಳಲ್ಲಿ ಸೂರ್ಯನ ಶಾಖ ದಿನದಿಂದ ದಿನಕ್ಕೆ ಹೆಚ್ಚಾಗುವ ಹಿನ್ನಲೆಯಲ್ಲಿ ಹೀಟ್ ವೇವ್ (ಶಾಖದ ಹೊಡೆತ) ಸ್ಟ್ರೋಕ್‌ನಿಂದಾಗಿ ಸಾರ್ವಜನಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿರುತ್ತದೆ. ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮುಂಜಾಗ್ರತಾ ಕ್ರಮವಾಗಿ ಸಾರ್ವಜನಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಈ ಕೆಳಕಂಡ ಸಲಹೆಗಳನ್ನು ನೀಡಿದೆ.ಸಾರ್ವಜನಕರು ಬಿಸಿಲು ದಿನಗಳಲ್ಲಿ ಕೊಡೆ/ ಛತ್ರಿ ಬಳಸಬೇಕು ಹಾಗೂ ಸಾಧ್ಯವಾದಷ್ಟು ತಂಪಾದ ಸ್ಥಳಗಳಲ್ಲಿ ಉಳಿಯಲು ಪ್ರಯತ್ನಿಸಬೇಕು. ತೆಳುವಾದ ಸಡಿಲವಾದ ಹತ್ತಿಯ ಉಡುಪುಗಳನ್ನು ಧರಿಸಿ, ಆದಷ್ಟು ಬಿಳಿ ಬಣ್ಣದ ಬಟ್ಟೆಗಳ ಬಳಕೆ ಒಳ್ಳೆಯದು. ಹತ್ತಿಯ ಅಥವಾ ಟರ್ಬನ್ ಟೋಪಿ ಹಾಗೂ ಕೂಲಿಂಗ್ ಗ್ಲಾಸ್ ಧರಿಸಬೇಕು. ಹಿರಿಯ ನಾಗರಿಕರಿಗೆ, ಮಕ್ಕಳಿಗೆ ಹೆಚ್ಚು ನೀರು ಕುಡಿಯಲು ಕೊಡಬೇಕು. ಬೆಳಿಗ್ಗೆ 12 ರಿಂದ ಸಂಜೆ 03 ರವರೆಗೆ ಹೊರಾಂಗಣ ದೈಹಿಕ ಚಟುವಟಿಕೆಯನ್ನು ಕಡಿಮೆ ಮಾಡಲು ಪ್ರಯತ್ನಿಸಬೇಕು. ಸಾಕಷ್ಟು ನೀರು ಕುಡಿಯಿರಿ, ಮಜ್ಜಿಗೆ ಮತ್ತು ಗ್ಲೂಕೋಸ್ / (ಓ.ಆರ್.ಎಸ್.) ಎಳನೀರಿನಂತಹ ದ್ರವ ಪದಾರ್ಥಗಳನ್ನು ಹೆಚ್ಚು ಉಪಯೋಗಿಸಬೇಕು.ಕೊಠಡಿಯ ತಾಪಮಾನವನ್ನು ಕಡಿಮೆ ಮಾಡಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಿ, ಹೀಟ್ ಸ್ಟ್ರೋಕ್ ಲಕ್ಷಣಗಳನ್ನು ಹೊಂದಿರುವ ವ್ಯಕ್ತಿಯನ್ನು ತಂಪಾದ ಜಾಗಕ್ಕೆ ಸ್ಥಳಾಂತರಿಸಬೇಕು. ಶಾಖದ ಹೊಡೆತದಿಂದ ಬಳಲುತ್ತಿರುವ ವ್ಯಕ್ತಿಯು ಕನಷ್ಟ ಬಟ್ಟೆಯನ್ನು ಹೊಂದಿರುವಂತೆ ನೋಡಿಕೊಂಡು, ವ್ಯಕ್ತಿಗೆ ತಣ್ಣೀರಿನಿಂದ ಸ್ಪಾಂಜ್ ಮಾಡಬೇಕು ಅಥವಾ ಐಸ್ ಪ್ಯಾಕ್‌ಗಳನ್ನು ಉಪಯೋಗಿಸಬಹುದು ಅಥವಾ ವ್ಯಕ್ತಿಯನ್ನು ಐಸ್ ಬ್ಲಾಕ್‌ಗಳ ಮಧ್ಯ ಇಡಬಹುದು.

ಹೀಟ್ ವೇವ್ ಸ್ಟ್ರೋಕ್‌ಗೆ ಒಳಗಾದ ವ್ಯಕ್ತಿಗೆ ಯಾವುದೇ ಸುಧಾರಣೆ ಕಂಡುಬರದಿದ್ದರೆ, ಅವರನ್ನು ತಕ್ಷಣ ಆಸ್ಪತ್ರೆಗೆ ಸ್ಥಳಾಂತರಿಸಬೇಕು, ಕೂಲಿಂಗ್ ವ್ಯವಸ್ಥೆಯೊಂದಿಗೆ ಬೇಸಿಗೆಯಲ್ಲಿ ಹೊರಗಿನಿಂದ ಬಂದ ತಕ್ಷಣ ನೀರು/ ಓ.ಆರ್.ಎಸ್ /ಮಜ್ಜಿಗೆಯನ್ನು ಯಂತಹ ಪಾನೀಯ ಬಳಸಬಹುದು.5 ವರ್ಷದ ಒಳಗಿನ ಮಕ್ಕಳಿಗೆ ಪ್ರತಿ ಅರ್ಧ ಗಂಟೆಗೊಮ್ಮೆ ಒಂದು ಚಿಟಿಕೆಯಷ್ಟು ಅಯೋಡಿಯನ್ ಉಪ್ಪು ಬೆರೆಸಿದ ನೀರನ್ನು ಕುಡಿಸುತ್ತಿರಬೇಕು. ಬೇಸಿಗೆ ದಿನಗಳಲ್ಲಿ ತಣ್ಣೀರಿನ ಸ್ನಾನ ಒಳ್ಳೆಯದು. ಆಹಾರದಲ್ಲಿ ಮಸಾಲೆ ಪದಾರ್ಥಗಳನ್ನು ಹೆಚ್ಚು ಬಳಸಬಾರದು. ಕಪ್ಪು, ನೀಲಿ ಬಣ್ಣದ ಬಟ್ಟೆ ಧರಿಸಬಾರದು. ಹೆಚ್ಚು ಕಾಟನ್ ಬಟ್ಟೆ ಧರಿಸಬೇಕು. ನೀರಿನ ಅಂಶ ಹೆಚ್ಚಾಗಿರುವ ತರಕಾರಿ/ಹಣ್ಣುಗಳನ್ನು ಸೇವಿಸುವುದು ಉತ್ತಮ. ಕಾಫಿ/ಟೀ ಹೆಚ್ಚು ಸಕ್ಕರೆ ಅಂಶವನ್ನು ಹೊಂದಿರುವ ಕಾರ್ಬೋನೆಟೆಡ್ ಪಾನೀಯ ಹಾಗೂ ಮದ್ಯಪಾನದಿಂದ ದೂರವಿರಬೇಕು. ಬಿಸಿ ಗಾಳಿ ಹಾಗೂ ಅತೀಯಾದ ತಾಪಮಾನದಿಂದ ಆರೋಗ್ಯ ಸಮಸ್ಯೆ ಉಂಟಾದಲ್ಲಿ ಸಮಿಪದ ಆರೋಗ್ಯ ಕೇಂದ್ರವನ್ನು ಸಂಪರ್ಕಿಸಿ ಅಥವಾ 108/102 ಗೆ ಕರೆ ಮಾಡಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ.

# ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಅಕ್ಬರ್‌ಸಾಬ ಬಬರ್ಚಿ ನೇಮಕ ಬಡ ವರ್ತಕನನ್ನು ಗುರುತಿಸಿದ್ದು ಸ್ವಾಗತಾರ್ಹ



ಗದಗ-16 : ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಹಿರಿಯ ಮುಸ್ಲಿಂ ಮುಖಂಡ, ಹಳೆ ಕಬ್ಬಿಣದ ವರ್ತಕರಾಗಿರುವ ಅಕ್ಬರ್‌ಸಾಬ ಬಬರ್ಚಿಯವರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಿರುವ ರಾಜ್ಯ ಸರ್ಕಾರದ ಕ್ರಮ ಸ್ವಾಗತಾರ್ಹ. ಇವರ ಅಧಿಕಾರಾವಧಿಯಲ್ಲಿ ಗದಗ-ಬೆಟಗೇರಿ ಅವಳಿ ನಗರ ಗಮನಾರ್ಹ ಬದಲಾವಣೆ ಆಗಲಿ ಎಂದು ಗದಗ ಜಿಲ್ಲಾ ಹಳೆ ಕಬ್ಬಿಣದ ವರ್ತಕರ ಸಂಘ (ರಿ) ಪ್ರಧಾನ ಕಾರ್ಯದರ್ಶಿ, ಬಸವರಾಜ ಜಕ್ಕಪ್ಪನವರ ಸೇರಿದಂತೆ ಸಂಘದ ಪದಾಧಿಕಾರಿಗಳು, ಮುಖಂಡರು ಶುಭ ಕೋರಿದರು.

ಗದಗ-ಬೆಟಗೇರಿ ನಗರಾಭಿವೃದ್ಧಿ ಕಾರ್ಯಾಲಯದಲ್ಲಿ ಅಕ್ಬರ್‌ಸಾಬ ಬಬರ್ಚಿಯವರನ್ನು ಸನ್ಮಾನಿಸಿ ಮಾತನಾಡಿದ ಬಸವರಾಜ ಜಕ್ಕಪ್ಪನವರ ನಗರದ ಸ್ವಚ್ಛತೆ ಸೇರಿದಂತೆ ಗುಜರಿ ಅಂಗಡಿಯವರ ಪಾತ್ರ ಮಹತ್ವದ್ದಾಗಿದೆ. ಒಂದೇ ಸಾಲಿನಡಿ ಗುಜರಿ ವರ್ತಕರಿಗೆ ಮಳಿಗೆಗಳನ್ನು ನಗರಸಭೆ ವಶಪಡಿಸಿಕೊಂಡಿರುವ ವಕಾರ ಸಾಲಗಳಲ್ಲಿ ನಿರ್ಮಾಣ ಮಾಡಿ ಅನುಕೂಲ ಕಲ್ಪಿಸಲು ಬಬರ್ಚಿಯವರು ಶ್ರಮಿಸುತ್ತಾರೆ ಎಂಬ ನಂಬಿಕೆ ಇದೆ. ಅದಕ್ಕೆ ಸಚಿವರಾದ ಎಚ್. ಕೆ. ಪಾಟೀಲ ಬೆಂಬಲಿಸುವವರು ಎಂದರು. ಈ ಸಂದರ್ಭದಲ್ಲಿ ಗದಗ ಜಿಲ್ಲಾ ಹಳೆ ಕಬ್ಬಿಣದ ವರ್ತಕರ ಸಂಘದ ಮುಖಂಡರಾದ ಉಪಾಧ್ಯಕ್ಷರಾದ ನಾರಾಯಣ ಯಲ್ಲಪ್ಪ ದೊಡ್ಮನಿ, ಸಹ ಕಾರ್ಯದರ್ಶಿ ಉಮೇಶ ಕದಡಿ, ವಜೀರಸಾಬ ನದಾಫ, ಅನೀಲ ಟಿ. ಇರಕಲ್ಲ, ಸಮೀರ ನದಾಫ, ಪರಶುರಾಮ ಎಚ್. ಕಟ್ಟಿಮನಿ, ಧರ್ಮಪ್ಪ ವೀರಪ್ಪ ಹೊಸಮನಿ, ಅಬ್ದುಲ್ ಅಜೀಜ ನರಗುಂದ, ಮುರಳಿ ಇಲಕಲ್ಲ, ಪೀರಸಾಬ ನದಾಫ, ಸಲೀಂ ಬಬರ್ಚಿ, ರಮೇಶ ಕಾಗಿ, ಚಾಂದಸಾಬ ಬೋದ್ಲೇಖಾನ, ಜಗದೀಶ ಪಲ್ಲೇದ, ದೀಪಕ ಇಲಕಲ್ಲ, ಪ್ರವೀಣ ಕಮತರ ಉಪಸ್ಥಿತರಿದ್ದು ಹೂ-ಹಣ್ಣು ನೀಡಿ ಗೌರವಿಸಿದರು.

# ಸಮಾಜ ಕಲ್ಯಾಣ ಇಲಾಖೆಯಿಂದ ಪ್ರೋತ್ಸಾಹಧನ: ವಿದ್ಯಾರ್ಥಿಗಳಿಗೆ ಸೂಚನೆ

ಕೊಪ್ಪಳ, ಮಾರ್ಚ್ 16 : ಸಮಾಜ ಕಲ್ಯಾಣ ಇಲಾಖೆ/ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಎಸ್.ಎಸ್.ಎಲ್.ಸಿಯಲ್ಲಿ ಪ್ರಥಮ ಪ್ರಯತ್ನದಲ್ಲಿ ಶೇ.60 ರಿಂದ 74.99 ಪಡೆದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮಂಜೂರು ಮಾಡಲಾಗುತ್ತಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಎಸ್.ಎಸ್.ಎಲ್.ಸಿಯಲ್ಲಿ ಪ್ರಥಮ ಪ್ರಯತ್ನದಲ್ಲಿ ಶೇ.60 ರಿಂದ 74.99 ಪಡೆದ ವಿದ್ಯಾರ್ಥಿಗಳಿಗೆ ರೂ.7000/- ಮತ್ತು ಶೇ.75 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ರೂ.15000/- ಗಳ ಪ್ರೋತ್ಸಾಹ ಧನವನ್ನು ಕೇಂದ್ರ ಕಛೇರಿಯಿಂದ ಮಂಜೂರಿಸಲಾಗುತ್ತಿದೆ.

2023-24ನೇ ಸಾಲಿನ ಅಂದರೆ 2023ರಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ ಮಾಡಿಸಿ, ಹತ್ತಿರದ ತಾಲೂಕಾ ಸಮಾಜ ಕಲ್ಯಾಣ ಇಲಾಖೆ/ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಕಛೇರಿಗೆ ಎಸ್.ಎಸ್.ಎಲ್.ಸಿ ಅಂಕಪಟ್ಟಿ ಝುರಾಕ್ಸ್ ಮತ್ತು ಆಧಾರ್ ಕಾರ್ಡ್ ಝುರಾಕ್ಸ್ ಪ್ರತಿಗಳನ್ನು ತೆಗೆದುಕೊಂಡು ಹೋಗಲು ಸೂಚಿಸಿದೆ.

ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ, ಕೊಪ್ಪಳ ಮತ್ತು ತಾಲ್ಲೂಕಿನ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ/ಕೊಪ್ಪಳ/ಗಂಗಾವತಿ/ಯಲಬುರ್ಗಾ/ಕುಷ್ಟಗಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳು, ಗಂಗಾವತಿ/ಕುಷ್ಟಗಿ ರವರನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.